ಪ್ರಶ್ನೆಗೆ ಉತ್ತರ ಕೊಡಲಿ.

ಅಧ್ಯಕ್ಷರು.– ಮಾನ್ಯ ಮಂತ್ರಿಗಳೆ, ಮಾನ್ಯ ಸಿದ್ದು ಸವದಿಯವರ ಪ್ರಶ್ನೆಗೆ ಏನು ಹೇಳುತ್ತಿರಾ ಹೇಳಿ.

ಶ್ರೀ ಸಿದ್ದು ಸವದಿ.– ಮಾನ್ಯ ಅಧ್ಯಕ್ಷರೆ, ಸಾಲ ಮನ್ನಾ ಮಾಡುವುದಕ್ಕೆ ಹೇಳಿ.

ಅಧ್ಯಕ್ಷರು.– ಆಯಿತು, ಬಿಡಿ. ಮಾನ್ಯ ಮಂತ್ರಿಯವರೆ, ಸಾಲ ಮನ್ನಾ ಮಾಡುತ್ತೀರಾ? ಸಾಲ ಮನ್ನಾ ಮಾಡುವುದಾದರೆ ಮಾಡಿ.

ಶ್ರೀ ಅಪ್ಪಾ ಸಾಹೇಬ (ಅಪ್ಪು) ಮಲ್ಲಪ್ಪ (ಪಟ್ಟಣ ಶೆಟ್ಟಿ).– ಮಾನ್ಯ ಅಧ್ಯಕ್ಷರೆ, ಆ ರೀತಿ ಅಲ್ಲ. ಇದು ಮನೆಗಳ ಸಾಲವನ್ನು ತೆಗೆದುಕೊಂಡಿರುವಂಥಾದ್ದು. ನಾವು ಪ್ರಯತ್ನವನ್ನು ಮಾಡುತ್ತೇವೆಂಬ ಮಾತನ್ನು ಈಗಾಗಲೇ ಹೇಳಿದ್ದೇವೆ. ನಾವು ಈ ಬಗ್ಗೆ ಸಾಕಷ್ಟು ಬಾರಿ ಚರ್ಚೆಯನ್ನು ಮಾಡಿದ್ದೇವೆ. ಇದು ಮನೆಗಳದ್ದು ನೇರವಾಗಿ ಮಾಡುವುದಕ್ಕೆ ಬರುವುದಿಲ್ಲ, ಮಾಡುವುದಕ್ಕೆ ಪ್ರಯತ್ನ ಮಾಡುತ್ತೇವೆಂದು ಹೇಳುತ್ತೇನೆ.

ಅಧ್ಯಕ್ಷರು.– ಈಗ ಸಭೆಯು ಮುಕ್ತಾಯವಾಗಿ ನಾಳೆ ಬೆಳಿಗ್ಗೆ 10.00 ಗಂಟೆಗೆ ಸೇರುವುದು.

(ಸದನವು ಸಂಜೆ 7 ಗಂಟೆ 25 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ 27ನೇ ಜುಲೈ ಮಾಹೆ 2007ರ ಶುಕ್ರವಾರದಂದು ಬೆಳಿಗ್ಗೆ 10.00 ಗಂಟೆಗೆ ಸೇರಲು ನಿಶ್ಚಯಿಸಿತು)

ಅನುಬಂಧ–1

1099 (1236) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ).– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.–

ಅ) ರಾಜ್ಯದಲ್ಲಿನ ಎಲ್ಲಾ ಸರಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ವೈದ್ಯರ ಹುದ್ದೆಗಳೆಷ್ಟು ;

ಆ) ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).–

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳು 514.

ಆ) ಈ ಖಾಲಿ ಇರುವ ಹುದ್ದೆಗಳಲ್ಲಿ ವಿಶೇಷ ನೇರ ನೇಮಕಾತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದ ಅನುಮತಿ ನೀಡಿದ್ದು, ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸಂದರ್ಶನಗಳನ್ನು ನಡೆಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆಯಾಯಾ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ ಮತ್ತು ಎಮ್.ಬಿ.ಬಿ.ಎಸ್. ವೈದ್ಯರು ಇಲ್ಲದ ಕಡೆ ಆಯುಷ್ ವೈದ್ಯರನ್ನು ನೇಮಕ ಮಾಡಲಾಗುತ್ತಿದೆ.

ವಿಶೇಷ ಘಟಕ ಯೋಜನೆಯಡಿಯಲ್ಲಿ ಖರ್ಚು ಮಾಡಲಾದ ಹಣ

1100 (1263) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ).– ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.–

ಅ) ವಿಶೇಷ ಘಟಕ ಯೋಜನೆಯಡಿಯಲ್ಲಿ 2006–07ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಕೇಂದ್ರ ಸರ್ಕಾರದಿಂದ ಬಂದಿರುವ ನೆರವಿನ ಪ್ರಮಾಣವೆಷ್ಟು;

ಆ) ಈ ಹಣವನ್ನು ಯಾವ ಯಾವ ಇಲಾಖೆಗಳಿಗೆ ಎಷ್ಟೆಷ್ಟು ವಿತರಣೆ ಮಾಡಲಾಗಿದೆ;

ಇ) ಈ ಹಣದಲ್ಲಿ ಖರ್ಚಾಗಿರುವ ಹಣವೆಷ್ಟು; (ಇಲಾಖಾವಾರು ವಿವರ ನೀಡುವುದು)

ಈ) ಬಿಜಾಪುರ ಜಿಲ್ಲೆಯಲ್ಲಿನ ವಿವಿಧ ಇಲಾಖೆಗಳಿಗೆ ನೀಡಲಾದ ಹಣ ಹಾಗೂ ಇಲ್ಲಿಯವರೆಗೆ ಖರ್ಚು ಮಾಡಲಾದ ಹಣದ ವಿವರ ನೀಡುವುದು ?

ಶ್ರೀ ಬಾಲಚಂದ್ರ ಬಿ. ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು).–

ಅ) 2006–07ನೇ ಸಾಲಿಗೆ ವಿಶೇಷ ಕೇಂದ್ರೀಯ ನೆರವಿನಡಿ ಕೇಂದ್ರ ಸರ್ಕಾರದಿಂದ ಪರಿಶಿಷ್ಟ ಜಾತಿಯವರ ಆರ್ಥಿಕ ಅಭಿವೃದ್ಧಿಗಾಗಿ ರೂ. 2260.90 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಆ) 2006–07ನೇ ಸಾಲಿಗೆ ವಿಶೇಷ ಕೇಂದ್ರೀಯ ನೆರವಿನಡಿ ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ